ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 30 ನೇ ಸೆಪ್ಟೆಂಬರ್, 2020

ಲೋಕೋಪಯೋಗಿ ಇಲಾಖೆಯ ವತಿಯಿಂದ ರಸ್ತೆಗಳ ಕಾಮಗಾರಿಗಳ ಬಗ್ಗೆ

ಶ್ರೀ ಬಿ. ಕೆ. ಹರಿಪ್ರಸಾದ್(ವಿಧಾನಸಭೆಯಿಂದ ಚುನಾಯಿತರಾದವರು) –

1042 (1169) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಳೆದ ಮೂರು ವರ್ಷಗಳಿಂದ ರಾಜ್ಯದ ವಿವಿಧ ಜಿಲ್ಲೆಗಳ ರಸ್ತೆಗಳ ದುರಸ್ತಿಗಾಗಿ ಸರ್ಕಾರ ನಿಗದಿಪಡಿಸಿದ ಬಿಡುಗಡೆ ಮಾಡಿದ ವೆಚ್ಚ ಮಾಡಿರುವ ಮೊತ್ತವೆಷ್ಟು; (ಜಿಲ್ಲಾವಾರು ವಿವರಗಳನ್ನು ನೀಡುವುದು)

(ಆ) ಅನುದಾನದ ಕೊರತೆಯಿಂದಾಗಿ ಲೋಕೋಪಯೋಗಿ ರಸ್ತೆಗಳು ದುರಸ್ತಿಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬಂದಿದ್ದಲ್ಲಿ, ಹೆಚ್ಚಿನ ಅನುದಾನವನ್ನು ನೀಡಿ ತ್ವರಿತವಾಗಿ ರಸ್ತೆಗಳನ್ನು ದುರಸ್ತಿಪಡಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ;

(ಈ) ರಸ್ತೆಗಳ ದುರಸ್ತಿ ಕಾಮಗಾರಿಯನ್ನು ಯಾವಾಗ ಕೈಗೆತ್ತಿಕೊಳ್ಳಲಾಗುವುದು? (ಜಿಲ್ಲಾವಾರು ವಿವರ ನೀಡುವುದು)